# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1154 |
| ಸದಸ್ಯರ ಹೆಸರು | : | ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 16-12-2025 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆ ಲಿಂಗಸುಗೂರು ಪಟ್ಟಣದಲ್ಲಿ ಅಮೃತ್-2.0 ಯೋಜನೆಯ ಕಾಮಗಾರಿಯನ್ನು ಯಾವ ವರ್ಷದಲ್ಲಿ ಪ್ರಾರಂಭಿಸಲಾಯಿತು; | ರಾಯಚೂರು ಜಿಲ್ಲೆಯ ಲಿಂಗಸುಗೂರು ಪಟ್ಟಣದಲ್ಲಿ ಅಮೃತ್-2.0 ಯೋಜನೆಯಡಿ ಸುಧಾರಿತ ನೀರು ಸರಬರಾಜು ಕಾಮಗಾರಿಯನ್ನು ದಿನಾಂಕ: 18-05-2024ರಂದು ಪ್ರಾರಂಭಿಸಲಾಗಿರುತ್ತದೆ. |
| ಆ) | ಈ ಸಮಯದಲ್ಲಿ ಸದರಿ ಯೋಜನೆಗೆ ನಿಗಧಿಪಡಿಸಲಾದ ಯೋಜನಾ ವೆಚ್ಚವೆಷ್ಟು; | ಅಮೃತ್-2.0 ಯೋಜನೆಯಡಿ ಲಿಂಗಸುಗೂರು ಪಟ್ಟಣಕ್ಕೆ ಸುಧಾರಿತ ನೀರು ಸರಬರಾಜು ಯೋಜನೆಗೆ ರೂ.9376.00 ಲಕ್ಷಗಳಿಗೆ (ರೂ.8910.00 ಲಕ್ಷಗಳು ಯೋಜನೆ + ರೂ.466.00 ಲಕ್ಷಗಳು ನಿರ್ವಹಣೆ) ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. |
| ಇ) | ಸದರಿ ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ ಹಾಗೂ ಇಲ್ಲಿಯವರೆಗೆ ಎಷ್ಟು ಅನುದಾನ ಖರ್ಚು ಮಾಡಲಾಗಿದೆ; | ಸದರಿ ಯೋಜನೆಯನ್ನು ಟೆಂಡರ್ ಆಧಾರದಡಿ ಮೆ\|\| ಎಮ್.ಎನ್.ರಮೇಶ, ಇಂಜಿನಿಯರ್ಸ್ ಮತ್ತು ಕಾಂಟ್ರಾಕ್ಟರ್ಸ್, ತುಮಕೂರು ಜೆವಿ ಎ.ಎಮ್ ಕನ್ಸಟ್ರಕ್ಷನ್ಸ್, ತುಮಕೂರು ಇವರಿಗೆ ವಹಿಸಲಾಗಿರುತ್ತದೆ. ಕಾಮಗಾರಿಯ ಸ್ಥಳವನ್ನು ದಿನಾಂಕ:18.05.2024 ರಂದು ಗುತ್ತಿಗೆದಾರರಿಗೆ ಹಸ್ತಾಂತರಿಸಲಾಗಿರುತ್ತದೆ. ಸದರಿ ಕಾಮಗಾರಿಯು ಪ್ರಗತಿಯಲ್ಲಿದ್ದು, ಶೇ.70 ರಷ್ಟು ಕಾಮಗಾರಿಯು ಪೂರ್ಣಗೊಂಡಿರುತ್ತದೆ.ಸದರಿ ಕಾಮಗಾರಿಯ ಕಾಲಾವಧಿ 24 ತಿಂಗಳುಗಳಾಗಿದ್ದು, ದಿನಾಂಕ:17.05.2026ರೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಿ ಚಾಲನೆಗೊಳಿಸಲು ಉದ್ದೇಶಿಸಲಾಗಿದೆ.<br>ಸದರಿ ಕಾಮಗಾರಿಗೆ ಇಲ್ಲಿಯವರೆಗೆ ರೂ.3575.00 ಲಕ್ಷಗಳು ಖರ್ಚಾಗಿರುತ್ತದೆ. |
| ಈ) | ಸದರಿ ಕಾಮಗಾರಿಯನ್ನು ಮುಕ್ತಾಯಗೊಳಿಸಲು ಶೀಘ್ರ ಕ್ರಮವಹಿಸಲಾಗಿದೆಯೇ? | ಸದರಿ ಕಾಮಗಾರಿಯು ಪ್ರಗತಿಯಲ್ಲಿದ್ದು, ಶೇ.70 ರಷ್ಟು ಕಾಮಗಾರಿಯು ಪೂರ್ಣಗೊಂಡಿರುತ್ತದೆ. ದಿನಾಂಕ: 17.05.2026ರೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಿ ಚಾಲನೆಗೊಳಿಸಲು ಉದ್ದೇಶಿಸಲಾಗಿದೆ. |

ಸಂಖ್ಯೆ: ನಅಇ 276 ಸಿಎಸ್ಎಸ್ 2025

(ಬಿ.ಎಸ್.ಸುರೇಶ)
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು